# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 18-12-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
8. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಬಾಕಿ ಇರುವ ರಸ್ತೆ ಗುಂಡಿಗಳನ್ನು ತುಂಬಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ಈಗಾಗಲೇ ವಾರ್ಡ್ ಪ್ರದೇಶದಲ್ಲಿ ಶೇ.70 ರಷ್ಟು ರಸ್ತೆ ಗುಂಡಿಗಳನ್ನು ಡಾಂಬರು ಸಮೇತ ಮುಚ್ಚಲಾಗಿರುತ್ತದೆ. ಬಾಕಿ ಇರುವ ಗುಂಡಿಗಳನ್ನು 04 ದಿನಗಳ ಒಳಗಾಗಿ ಪೂರ್ಣಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.



Scanned with CamScanner

2) ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ) ರವರು ಮಾತನಾಡಿ ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ಜಲವಾಯು ವಿಹಾರ್ ಸುತ್ತಮುತ್ತಲ ಪ್ರದೇಶದಲ್ಲಿ ಪಾದಾಚಾರಿ ಮಾರ್ಗದಲ್ಲಿ ವ್ಯಾಪಾರಸ್ಥರು ಒತ್ತುವರಿ ಮಾಡಿಕೊಂಡಿರುವುದಾಗಿ, ತಿಳಿಸಿದಾಗ ಈ ಬಗ್ಗೆ ಚರ್ಚಿಸಿ, ಕೂಡಲೇ ಪ್ರಮುಖ ರಸ್ತೆಗಳ ಪಾದಾಚಾರಿ ಮಾರ್ಗಗಳಲ್ಲಿ ಒತ್ತುವರಿ ಮಾಡಿರುವ ಸಣ್ಣ ಪುಟ್ಟ ಅಂಗಡಿಗಳನ್ನು ತೆರವುಗೊಳಿಸಲು ಆರೋಗ್ಯ ಹಾಗೂ ಕಾಮಗಾರಿ ಇಲಾಖೆ, ಪೊಲೀಸರ ಸಹಯೋಗದೊಂದಿಗೆ ಕ್ರಮ ವಹಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

3) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಹಲವು ಬಡಾವಣೆಗಳಲ್ಲಿ ಮತದಾರ ಪಟ್ಟಿಯಲ್ಲಿ ಹೆಸರುಗಳನ್ನು ಸೇರ್ಪಡೆ ಮಾಡಲು ಹಾಗೂ ಹಾಲೀ ಪಟ್ಟಿಯಲ್ಲಿರುವ ಹೆಸರುಗಳನ್ನು ವರ್ಗಾಯಿಸಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಂದಾಯ ನಿರೀಕ್ಷಕರು ಮಾತನಾಡಿ, ಯಾವುದೇ ಅರ್ಹತೆಯುಳ್ಳ ವ್ಯಕ್ತಿಯ ಮತದಾರ ಪಟ್ಟಿಯಲ್ಲಿ ಸೇರಿಸಲು ಅಥವಾ ವರ್ಗಾಯಿಸಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದಲ್ಲಿ, ಕಂದಾಯ ವಿಭಾಗದಿಂದ ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

4) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ರಾತ್ರಿ ಹಾಗೂ ಹಗಲಿನಲ್ಲಿ ಕಳ್ಳತನಗಳು ಹೆಚ್ಚಾಗುತ್ತಿದ್ದು, ಬಡಾವಣೆಗಳ ನಿವಾಸಿಗಳು ಭಯಭೀತರಾಗುತ್ತಿದ್ದಾರೆ ಹಾಗೂ ಆರಕ್ಷಕ ಇಲಾಖೆಯವರು ಸಮರ್ಪಕವಾಗಿ ಸ್ಪಂಧಿಸುತ್ತಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ ಅಧಿಕಾರಿಗಳು ಈ ಬಗ್ಗೆ ತೀವ್ರ ನಿಗಾ ವಹಿಸುವುದಾಗಿ ಸಭೆಗೆ ತಿಳಿಸಿದರು.

5) ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಪರೀಕ್ಷೆಗಳಿಗೆ ಒಳಪಟ್ಟ 1402 ಪ್ರಕರಣಗಳಿದ್ದು, ಈ ಪೈಕಿ 03 ಪ್ರಕರಣಗಳು ಹೋಮ್ ಐಸೋಲೇಷನ್‌ನಲ್ಲಿ ಇರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಒಟ್ಟು 54952 ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 50634 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna kumar A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಪ್ರತಿಯನ್ನು

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner